ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

15 ಜನವರಿ 2026 ಗುರುವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 303 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629





## ಮಕರ ಸಂಕ್ರಾಂತಿ ಹಬ್ಬದ ಹಾರ್ದಿಕ ಶುಭಾಶಯಗಳು

# ಜಿ ರಾಮ್ ಜಿ ವಿರೋಧಿಸಿ ವಿಶೇಷ ಅಧಿವೇಶನ

## ಜ.22ರಿಂದ 31ರವರೆಗೆ ವಿಧಾನಮಂಡಲ ಕಲಾಪ : ಸಂಪುಟ ಸಭೆಯಲ್ಲಿ ನಿರ್ಧಾರ

• ಪ್ರಜೋದಯ ವರದಿ

**ಬೆಂಗಳೂರು:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ (ಮನರೇಗಾ) ರದ್ದುಗೊಳಿಸಿ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಬಿ-ಜಿ ರಾಮ್-ಜಿ ಮಸೂದೆ ವಿರುದ್ಧ ಚರ್ಚಿಸಲು ರಾಜ್ಯ ಸರ್ಕಾರ ಜನವರಿ 22ರಿಂದ ಒಂದು ವಾರ ವಿಧಾನಮಂಡಲ ವಿಶೇಷ ಅಧಿವೇಶನ ಕರೆದಿದೆ.

ವಿಧಾನಸೌಧದಲ್ಲಿ ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ವಿಶೇಷ ತುರ್ತು ಸಚಿವ ಸಂಪುಟ ಸಭೆಯಲ್ಲಿ ಜ.22 ರಿಂದ 31ರ ವರೆಗೆ ವಿಶೇಷ ಅಧಿವೇಶನ ನಡೆಸಲು ನಿರ್ಧರಿಸಲಾಗಿದೆ. ಈ ವಿಶೇಷ ಅಧಿವೇಶನದಲ್ಲಿ ವಿಬಿಜಿ ರಾಮ್‌ಜಿ ಕಾಯ್ದೆಯನ್ನು ಹಿಂಪಡೆದು ಮನರೇಗಾ ಕಾಯ್ದೆಯನ್ನೇ ಮರುಸ್ಥಾಪಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿ ನಿರ್ಣಯ ಅಂಗೀಕರಿಸುವ ಸಾಧ್ಯತೆ ಇದೆ.

ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಅವರು, ಜ.22ರಂದು ಉಭಯ ಸದನ ಉದ್ದೇಶಿಸಿ ರಾಜ್ಯಪಾಲರು ಭಾಷಣ ಮಾಡಲಿದ್ದಾರೆ. ಕೇಂದ್ರ ಸರ್ಕಾರ ಮನರೇಗಾ ಯೋಜನೆ ಹೆಸರು ಬದಲಾವಣೆ ಮಾಡಿದ್ದು, ಈ ಬಗ್ಗೆ ವಿಶೇಷ ಅಧಿವೇಶನದಲ್ಲಿ ಚರ್ಚಿಸಲು ನಿರ್ಧರಿಸಲಾಗಿದೆ. ವಿಬಿಜಿ ರಾಮ್ ಜಿ ಕಾಯ್ದೆ ಸಮಾಜದ ಮೇಲೆ ಬೀರಿರುವ ಸಾಮಾಜಿಕ ಹಾಗು ಆರ್ಥಿಕ ಪರಿಣಾಮಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಹಾಗು ಜಾಗೃತಿ ಮೂಡಿಸಲು ವಿಧಾನ ಮಂಡಲದ ಜಂಟಿ ಅಧಿವೇಶನದಲ್ಲಿ ವಿಶೇಷ ಚರ್ಚೆ ನಡೆಸಲಾಗುವುದೆಂದು ಹೇಳಿದರು.

**ಜನ-ರಾಜ್ಯದ ಹಿತ ಕಾಪಾಡಲು ಸೂಕ್ತ ಹೆಜ್ಜೆ**

ಜನಹಿತ, ರಾಜ್ಯದ ಹಿತ ಕಾಪಾಡಲು ಸೂಕ್ತವಾದ ಹೆಜ್ಜೆ ಸರ್ಕಾರ ಇಡಲಿದೆ. ಒಕ್ಕೂಟ ವ್ಯವಸ್ಥೆಯಲ್ಲಿ ನಮ್ಮ ರಾಜ್ಯದ ಜನರ ಹಕ್ಕನ್ನು ಕಿತ್ತುಕೊಳ್ಳಲು ಮುಂದಾದರೆ ಸರ್ಕಾರ ಸುಮ್ಮನೆ ಕುಳಿತುಕೊಳ್ಳುವುದಿಲ್ಲ.



ಇಂತಹ ಸಂದರ್ಭದಲ್ಲಿ ಸರ್ಕಾರ ಅಧಿವೇಶನ ಕರೆಯದೇ ಬಿಡಲು ಸಾಧ್ಯವಿಲ್ಲ. ಕೇಂದ್ರ ಸರ್ಕಾರದ ಮೇಲೆ ನರೇಗಾ ಕಾಯ್ದೆಯ ಮರುಸ್ಥಾಪನೆಗಾಗಿ ಒತ್ತಡ ತರಲು ಪ್ರಯತ್ನ ಮಾಡಲಾಗುವುದು ಎಂದರು.

**ಆರೇಳು ರಾಜ್ಯಗಳಲ್ಲಿ ಅಸಮಾಧಾನ**

ಪಂಜಾಬ್, ತಮಿಳುನಾಡು ಸರ್ಕಾರ ಹೊಸ ಕಾಯ್ದೆ ವಿರುದ್ಧ ಧ್ವನಿ ಎತ್ತಿವೆ. ಆರೇಳು ರಾಜ್ಯಗಳು ತಮ್ಮ ಸ್ಪಷ್ಟ ನಿಲುವು ಹಾಗು ಅಸಮಾಧಾನವನ್ನು ಹೊರಹಾಕಿವೆ. ಮನರೇಗಾ ಕಾಯ್ದೆಯಡಿ ಕೇವಲ ಕೆಲಸ ಕೊಡುವುದು ಮಾತ್ರವಲ್ಲ, ಕೆಲಸ ಕೊಡದೇ ಹೋಗಿದ್ದರೆ, ಫಲಾನುಭವಿ ಉದ್ಯೋಗ ಭತ್ಯೆಯನ್ನು ಕೇಳಬಹುದಾಗಿತ್ತು. ಪಂಚಾಯಿತಿಗಳಿಗೆ ಕೆಲಸಗಳ ಬಗ್ಗೆ ತೀರ್ಮಾನಿಸುವ ಹಕ್ಕು ಇತ್ತು. ಹೊಸ ಕಾಯ್ದೆಯಡಿ ಪಂಚಾಯಿತಿಗಳಿಗೆ ಅಧಿಕಾರವಿಲ್ಲ. ಪಂಚಾಯತಿಗಳ ವ್ಯಾಪ್ತಿಗೂ ಬರುವುದಿಲ್ಲ. ಕೇಂದ್ರ ಸರ್ಕಾರವೇ ಎಲ್ಲಿ ಕಾಮಗಾರಿ ನಡೆಯಬೇಕೆಂದು ನಿರ್ಧರಿಸಲಿದೆ. ಗ್ರಾಮೀಣ ಆಸ್ತಿಯನ್ನು ಸೃಷ್ಟಿಸಲೆಂದು ಬಳಸಲಾಗುತ್ತಿದ್ದ ಕಾರ್ಮಿಕರನ್ನು ರಸ್ತೆ, ಟನಲ್ ನಿರ್ಮಾಣಕ್ಕೆ ಗುತ್ತಿಗೆದಾರರ ಬಳಿ ಕೆಲಸ ಮಾಡಬೇಕು ಎಂದರು.

**ಅಧಿಕಾರ ವಿಕೇಂದ್ರೀಕರಣಕ್ಕೆ ಕೊಡಲಿ ಏಟು**

ಜನರ ಕೆಲಸದ ಹಕ್ಕನ್ನು ಕಿತ್ತುಕೊಂಡು, ಪಂಚಾಯಿತಿಗಳಿಗೆ ನಿರ್ಣಯದ ಅಧಿಕಾರವನ್ನು ಕಸಿದುಕೊಂಡು, ಪಂಚಾಯಿತಿಗಳಿಗೆ ನೀಡಲಾಗಿದ್ದ ಅಧಿಕಾರವನ್ನು ಸಂಪೂರ್ಣವಾಗಿ ಕಿತ್ತುಕೊಂಡು ಕೇಂದ್ರದಲ್ಲಿ ಅಧಿಕಾರವಿಟ್ಟುಕೊಳ್ಳುವುದು ಅಧಿಕಾರ ವಿಕೇಂದ್ರೀಕರಣದ ಪರಿಕಲ್ಪನೆಗೆ ಕೊಡಲಿ ಏಟು ಕೊಡಲಾಗಿದೆ. ಈ ಎಲ್ಲಾ ಕಾರಣಗಳಿಂದಾಗಿ ಜನರನ್ನು ಜಾಗೃತಗೊಳಿಸಿ, ವಿಶೇಷ ಚರ್ಚೆ ಮಾಡಿ, ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಲು ನಿರ್ಣಯ ಮಾಡಲಾಗಿದೆ ಎಂದು ಹೇಳಿದರು.

### ಕಾಂಗ್ರೆಸ್ ವಿರೋಧಕ್ಕೆ ಬಿಜೆಪಿ ತಿರುಗೇಟು

ಕಾಂಗ್ರೆಸ್ ಅವಧಿಯಲ್ಲಿ ಮನರೇಗಾದಲ್ಲಿ 11 ಲಕ್ಷ ಕೋ. ರೂ. ಮೊತ್ತದ ಭ್ರಷ್ಟಾಚಾರ ಆಗಿದೆ. ಈ ಅಕ್ರಮ, ವ್ಯಾಪಕ ಭ್ರಷ್ಟಾಚಾರ ತಡೆಯಲೆಂದೇ ಕೇಂದ್ರ ಸರ್ಕಾರ ವಿಬಿಜಿ ರಾಮ್ ಜಿ ಕಾಯ್ದೆ ಜಾರಿ ತಂದಿದೆ. ಆದರೆ, ಕಾಂಗ್ರೆಸ್‌ಗೆ ಇದೇ ದೊಡ್ಡ ಸಮಸ್ಯೆಯಾಗಿದೆ. ವಿಬಿಜಿ ರಾಮ್ ಜಿ ಕಾಯ್ದೆಯಲ್ಲಿ ಎಐ ತಂತ್ರಜ್ಞಾನ, ಜಿಪಿಎಸ್ ಟ್ರ್ಯಾಕಿಂಗ್ ಅಳವಡಿಸಿದ್ದು, ಕೆಲಸದ ಗುಣಮಟ್ಟವನ್ನೂ ಪರೀಕ್ಷಿಸಲಾಗುತ್ತಿದೆ. ಮನರೇಗದಲ್ಲಿ ಹಣ ಹೊಡೆಯುತ್ತಿದ್ದ ಕಾಂಗ್ರೆಸ್‌ನ ಮಧ್ಯವರ್ತಿಗಳಿಗೆ ಇದುವೇ ತಲೆನೋವಾಗಿ ಪರಿಣಮಿಸಿದೆ ಬಿಜೆಪಿ ತಿರುಗೇಟು ನೀಡಿದೆ.

# ಸಂಸದರ ಕ್ಷೇತ್ರ ಅಭಿವೃದ್ಧಿ ಅನುದಾನ ಪೂರ್ಣ ಬಳಕೆ

## ಒಂದೂವರೆ ವರ್ಷದಲ್ಲಿ 178 ಕಾಮಗಾರಿ ಶಿಫಾರಸ್ಸು | 108 ಕೆಲಸಕ್ಕೆ ಅನುಮೋದನೆ

• ಪ್ರಜೋದಯ ವರದಿ

**ಹಾಸನ:** ಲೋಕಸಭಾ ಕ್ಷೇತ್ರ ಅಭಿವೃದ್ಧಿಗಾಗಿ ಸಂಸದರಿಗೆ ಕೇಂದ್ರ ಸರ್ಕಾರದಿಂದ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಬಿಡುಗಡೆಯಾದ 10 ಕೋ.ರೂ.ಗಳನ್ನು ಸಂಸದ ಶ್ರೇಯಸ್ ಪಟೇಲ್ ಅವರು ವಿವಿಧ ಕಾಮಗಾರಿಗೆ ವಿನಿಯೋಗಿಸಿದ್ದಾರೆ.

2024-25 ಹಾಗು 2025-26ರಲ್ಲಿ ಬಿಡುಗಡೆಯಾದ 9.80 ಕೋ.ರೂ. ಅನುದಾನ ಸದ್ಬಳಕೆ ಮಾಡಲಾಗಿದೆ. 2024-25ರಲ್ಲಿ 4.90 ಕೋ. ರೂ. ಅನುದಾನ ಬಿಡುಗಡೆಯಾಗಿದ್ದು, 4.88 ಕೋ.ರೂ.ಗೆ 111 ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಅದರಲ್ಲಿ 30 ಕಾಮಗಾರಿ ಬಾಕಿ ಇದ್ದು, 1.24 ಕೋ. ರೂ. ಅನುದಾನದ ಅವಶ್ಯಕತೆ ಇದೆ. ಒಟ್ಟು 111 ಕಾಮಗಾರಿಗಳಲ್ಲಿ 67ಕ್ಕೆ ಆಡಳಿತಾತ್ಮಕ ಅನುಮೋದನೆ ದೊರೆತಿದೆ. 2025-26ರಲ್ಲಿ 4.90 ಕೋ. ರೂ. ಬಿಡುಗಡೆಯಾಗಿದ್ದು, 66 ಕಾಮಗಾರಿಗಳನ್ನು ಸಂಸದ ಶ್ರೇಯಸ್ ಪಟೇಲ್ ಶಿಫಾರಸ್ಸು ಮಾಡಿದ್ದಾರೆ. ಅದಕ್ಕಾಗಿ 4.12 ಕೋ.ರೂ. ಅಂದಾಜು ಮೊತ್ತ ನಿಗದಿಪಡಿಸಿದ್ದು, 25 ಕಾಮಗಾರಿಗಳು ಬಾಕಿ ಇವೆ. 41



ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ದಾಖಲೆ ಬಿಡುಗಡೆ ಮಾಡಿದ್ದಾರೆ.

**ಗ್ರಾಮೀಣ ಪ್ರದೇಶ ಅಭಿವೃದ್ಧಿಗೆ ಕ್ರಮ**

ಲೋಕಸಭಾ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ಸಂಸದರಿಗೆ ಕೇಂದ್ರ ಸರ್ಕಾರದಿಂದ ಸಿಗುವ ಅಧಿಕ ಅನುದಾನ ಇದಾಗಿದೆ. ಹಳ್ಳಿಗಳಲ್ಲಿ ಸಮುದಾಯ ಭವನ, ಚರಂಡಿ, ಸಿಸಿ ರಸ್ತೆ, ಕುಡಿಯುವ ನೀರು, ಅಂಗವಿಕಲರಿಗೆ ತ್ರಿಚಕ್ರ ವಾಹನ ವಿತರಣೆ, ಶುದ್ಧ ಕುಡಿಯುವ ನೀರಿನ ಘಟಕ ಹೀಗೆ ನಾನಾ ಕಾರ್ಯಕ್ರಮಗಳನ್ನು ಕೈಗೊಳ್ಳಬಹುದು. ನಿಗದಿತ ಕಾಮಗಾರಿಗೆ ಹೆಚ್ಚುವರಿ ಅನುದಾನ ಬೇಕಿದ್ದಕ್ಕೆ ಜಿಲ್ಲಾ ಪಂಚಾಯಿತಿ ಅಥವಾ ಗ್ರಾಮ ಪಂಚಾಯಿತಿ ಅನುದಾನ ಪಡೆಯಲು ಅನುಕೂಲವಿದೆ.

**ಕುಡಿಯುವ ನೀರು, ರಸ್ತೆಗೆ ಆದ್ಯತೆ**

ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನವನ್ನು ಸಾಮಾನ್ಯವಾಗಿ ಸಮುದಾಯ ಭವನ ನಿರ್ಮಾಣಕ್ಕೆ ವಿನಿಯೋಗ ಮಾಡಿಕೊಂಡು ಜನಪ್ರತಿನಿಧಿಗಳು ಗ್ರಾಮೀಣ ಭಾಗದಲ್ಲಿ ಮತ ಬ್ಯಾಂಕ್ ಭದ್ರಪಡಿಸಿಕೊಳ್ಳಲು ಯೋಚಿಸುತ್ತಾರೆ. ಆದರೆ, ಸಂಸದ ಶ್ರೇಯಸ್ ಪಟೇಲ್ ಅವರು ಶುದ್ಧ ಕುಡಿಯುವ ನೀರಿನ ಘಟಕ ಹಾಗು ರಸ್ತೆ ಕಾಮಗಾರಿಗೆ ಆದ್ಯತೆ ನೀಡಿದ್ದಾರೆ. ಹೊಳೆನರಸೀಪುರ, ಚನ್ನರಾಯಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಧಿಕ ಪ್ರಮಾಣದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ.

# ಕಂದಾಯ ಪಾವತಿಸದವರಿಗೆ ಪಾಲಿಕೆ ಶಾಕ್

• ಪ್ರಜೋದಯ ವರದಿ

**ಹಾಸನ:** ಹಲವು ವರ್ಷಗಳಿಂದ ಮಹಾನಗರ ಪಾಲಿಕೆಗೆ ಪಾವತಿ ಮಾಡಬೇಕಿದ್ದ ಕಂದಾಯವನ್ನು ಬಾಕಿ ಉಳಿಸಿಕೊಂಡಿರುವ ವಾಣಿಜ್ಯ ಕಟ್ಟಡಗಳ ವಿರುದ್ಧ ಅಧಿಕಾರಿಗಳು ಪ್ರಹಾರ ನಡೆಸಿದ್ದು, ಬುಧವಾರ ನಗರದ ಸಾಲಗಾಮೆ ರಸ್ತೆಯ ಸಾಯಿಬಾಬಾ ದೇವಸ್ಥಾನ ಸಮೀಪದ ಪೆಟ್ರೋಲ್ ಬಂಕ್ ಕಚೇರಿಗೆ ಬೀಗ ಹಾಕಲಾಯಿತು.

ಮಹಾನಗರ ಪಾಲಿಕೆ ಪೌರಾಯುಕ್ತ ಆರ್.ಕೃಷ್ಣಮೂರ್ತಿ ಹಾಗು ಸಿಬ್ಬಂದಿ ಬೀಗ ಹಾಕುವ ಮೂಲಕ ಎಚ್ಚರಿಕೆ ನೀಡಿದರು. ನಗರದಲ್ಲಿ ಕಂದಾಯ ಉಳಿಸಿಕೊಂಡಿರುವವರ ಸಂಖ್ಯೆ ಹೆಚ್ಚಿದ್ದು, ಎಲ್ಲರಿಗೂ ನೋಟೀಸ್ ಜಾರಿ ಮಾಡಲಾಗಿತ್ತು. ಯಾವುದಕ್ಕೂ ಪ್ರತಿಕ್ರಿಯೆ ನೀಡದ ಹಿನ್ನಲೆಯಲ್ಲಿ ಬೀಗ ಹಾಕಲಾಗುತ್ತಿದೆ ಎಂದು ಆರ್. ಕೃಷ್ಣಮೂರ್ತಿ ಅವರು ಹೇಳಿದರು.

ಪೆಟ್ರೋಲ್ ಬಂಕ್‌ನವರು 2002 ರಿಂದ ಸುಮಾರು 35 ಲಕ್ಷ ರೂ. ಬಾಕಿ ಉಳಿಸಿಕೊಂಡಿದ್ದಾರೆ.ಹಲವು ಬಾರಿ ನೋಟೀಸ್ ನೀಡಿದ್ದರೂ ಬಾಕಿ ಪಾವತಿ



ಮಾಡಿಲ್ಲ. ಮೊದಲು ವಾಣಿಜ್ಯ ಸಂಕೀರ್ಣ ಮತ್ತು ಮಳಿಗೆಗಳ ಮೇಲೆ ಕ್ರಮ ಕೈಗೊಳ್ಳಲಾಗುವುದೆಂದರು.

ಹಾಸನ ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ ಬಳಿಕ ವ್ಯಾಪ್ತಿ ವಿಸ್ತರಿಸಿದೆ. ವಾರ್ಷಿಕ 20 ಕೋ.ರೂ. ಕಂದಾಯ ಪಾವತಿಯಾಗುತ್ತದೆ. ಮುಂದಿನ ವರ್ಷದಿಂದ ಅದರ ಪ್ರಮಾಣ ಹೆಚ್ಚಲಿದೆ. ಯಾರ‍್ಯಾರು ಕಂದಾಯ ಪಾವತಿಸಲು ನಿರ್ಲಕ್ಷ್ಯ ತೋರಿಸುತ್ತಾರೆಯೋ ಅಂತಹವರಿಗೆ ಇದೇ ಪ್ರಕ್ರಿಯೆ ಮುಂದುವರಿಯಲಿದೆ ಎಂದು ಎಚ್ಚರಿಕೆ ನೀಡಿದರು.

**ನೀರಿನ ಸಂಪರ್ಕ ಕಡಿತ**

ವಾಣಿಜ್ಯ ಮಳಿಗೆಗಳಿಂದ ಕಂದಾಯ ವಸೂಲಾತಿ ಪ್ರಕ್ರಿಯೆ ಮುಗಿದ ಬಳಿಕ ಮನೆಗಳಿಂದ ಭೇಟಿ ನೀಡಲಾಗುವುದು. ದೀರ್ಘಾವಧಿವರೆಗೆ ಬಾಕಿ ಉಳಿಸಿಕೊಂಡಿರುವವರಿಗೆ ನೋಟೀಸ್ ನೀಡಲಾಗಿದೆ. ನಿಗದಿತ ಅವಧಿಯೊಳಗೆ ಕಂದಾಯ ಪಾವತಿಸದಿದ್ದರೆ ಮನೆಗಳಿಗೆ ನೀರಿನ ಸಂಪರ್ಕ ಕಡಿತಗೊಳಿಸಲಾಗುವುದೆಂದು ತಿಳಿಸಿದರು.

# ಅಕಾಲಿಕ ಮಳೆ : ಕಾಫಿ ಬೆಳೆಗಾರರಿಗೆ ಕಂಟಕ


## ಕಣದಲ್ಲಿ ಒಣ ಹಾಕಿದ್ದ ಫಸಲು ಮಣ್ಣು ಪಾಲು | ಮಲೆನಾಡಿನಲ್ಲಿ ಮುಂದುವರೆದ ಮಳೆ


• ಪ್ರಜೋದಯ ವರದಿ

**ಹಾಸನ:** ಮಲೆನಾಡು ಭಾಗದಲ್ಲಿ ಸುರಿಯುತ್ತಿರುವ ಅಕಾಲಿಕ ಮಳೆ ಕಾಫಿ ಬೆಳೆಗಾರರಿಗೆ ಕಂಟಕವಾಗಿ ಪರಿಣಮಿಸಿದೆ. ಮಂಗಳವಾರ ರಾತ್ರಿ ಸುರಿದ ಧಾರಾಕಾರ ಮಳೆಗೆ ಕಾಫಿ ಮಣ್ಣು ಪಾಲಾಗಿದೆ.

ಹಲವೆಡೆ ಅನಿರೀಕ್ಷಿತವಾಗಿ ಸುರಿದ ಮಳೆಯಿಂದಾಗಿ ಕೊಯ್ಲು ಮಾಡಿ ಕಣದಲ್ಲಿ ಒಣಗಲು ಹಾಕಿದ್ದ ಕಾಫಿ ಮಳೆಯಲ್ಲಿ ನೆನೆದು ಸಂಪೂರ್ಣ ಹಾಳಾಗಿ, ಕಾಫಿ ಬೆಳೆಗಾರರು ಆರ್ಥಿಕ ನಷ್ಟ ಅನುಭವಿಸುವಂತಾಗಿದೆ. ಅನಿರೀಕ್ಷಿತ ಮಳೆಯಿಂದಾಗಿ ಕಾಫಿ ಹೂವು, ಕಾಫಿ ಫಸಲು ಸೇರಿ ಕಾಫಿ ಬೆಳೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆ.

ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ಮಳೆಗೆ ಕೊಯ್ಲು ಮಾಡಿರುವ ಕಾಫಿ ಹಣ್ಣನ್ನು ಒಣಗಿಸಲಾಗದೆ ಬೆಳೆಗಾರರು ಪರದಾಡುತ್ತಿದ್ದಾರೆ. ಬುಧವಾರವೂ ಸಕಲೇಶಪುರ ತಾಲ್ಲೂಕಿನ ಹಲವು ಭಾಗದಲ್ಲಿ ಮಳೆ ಸಂಜೆಯಿಂದಲೇ ಪ್ರಾರಂಭವಾಗಿದೆ. ಮಂಗಳವಾರ ರಾತ್ರಿ ಏಕಾಏಕಿ ಸುರಿದ ಜೋರು ಮಳೆಗೆ ಬಯಲು ಪ್ರದೇಶ ಹಾಗು ಕಣದಲ್ಲಿ ಒಣಗಲು ಹಾಕಿದ್ದ ಕಾಫಿ ಕೊಚ್ಚಿ ಹೋಗಿ ಮಣ್ಣು ಪಾಲಾಗಿದೆ. ಮಣ್ಣಿನ ಕಣದ ಮೇಲೆ ಒಣಗಲು ಹಾಕಿದ್ದ ಕಾಫಿ ಹಣ್ಣು, ಮಣ್ಣು ಮಿಶ್ರಿತವಾಗಿ ಸಂಪೂರ್ಣ ವಾಗಿ ಹಾನಿಗೀಡಾಗಿದೆ. ಏಕಾಏಕಿ ಮಳೆ ಸುರಿಯಲು ಆರಂಭವಾಗಿದ್ದರಿಂದ ಕಾಫಿ ಬೀಜವನ್ನು ಸುರಿಯುವ ಮಳೆಯ ನಡುವೆಯೇ ರಾಶಿ ಮಾಡಿ, ರಕ್ಷಣೆ ಮಾಡಿಕೊಳ್ಳಲು ಬೆಳೆಗಾರರು, ಕಾರ್ಮಿಕರು ಹರಸಾಹಸ ಪಡುವಂತಾಯಿತು. ಸಂಪೂರ್ಣವಾಗಿ ಒಣಗಿ ಇನ್ನೇನು ಮಾರಾಟ ಮಾಡಬೇಕೆಂದು ಕೊಂಡಿದ್ದ ಫಸಲು ಕೂಡ ಮಳೆಯಲ್ಲಿ ನೆನೆದು ಹೋಗಿದೆ.





ಮಲೆನಾಡು ಭಾಗ, ಪಶ್ಚಿಮಘಟ್ಟ ವ್ಯಾಪ್ತಿಯಲ್ಲಿ ಮಳೆ, ಮೋಡ ಕವಿದ ವಾತಾವರಣ ಮುಂದುವರೆದಿರುವುದರಿಂದ ಕಾಫಿ ಗುಣಮಟ್ಟ ಕಳೆದುಕೊಳ್ಳುವ ಆತಂಕ ಎದುರಾಗಿದೆ. ಕಾರ್ಮಿಕರ ಕೊರತೆಯಿಂದ ರೋಬಸ್ಟಾ ಕಾಫಿ ಕೊಯ್ಲು ಬಾಕಿ ಇದ್ದು, ಮಳೆಗೆ ಆರ್ಭಟಕ್ಕೆ ಉದುರಿ ತೋಟದಲ್ಲೇ ಮಣ್ಣು ಸೇರಿದೆ.

**ಒಂದು ಇಂಚಿಗೂ ಹೆಚ್ಚು ಮಳೆ**

ಸಕಲೇಶಪುರ ತಾಲ್ಲೂಕಿನ ವಿವಿಧ ಭಾಗಗಳಲ್ಲಿ 1 ಇಂಚಿಗೂ ಹೆಚ್ಚು ಮಳೆಯಾಗಿದೆ. ಹೆತ್ತೂರು, ಹಾನುಬಾಳು, ಯಸಳೂರು ಹೋಬಳಿ ಭಾಗದಲ್ಲಿ ಸರಾಸರಿ 1 ಇಂಚಿನಷ್ಟು ಮಳೆ ದಾಖಲಾಗಿದೆ. ಆಲೂರು ತಾಲ್ಲೂಕಿನ ಕೆ.ಹೊಸಕೋಟೆ, ಬೇಲೂರು ತಾಲ್ಲೂಕಿನ ಹಲವು ಭಾಗಗಳಲ್ಲೂ ಅಕಾಲಿಕ ಮಳೆಯ ಆರ್ಭಟ ಜೋರಾಗಿತ್ತು. ಉಳಿದಂತೆ ಅರಕಲಗೂಡು, ಹಾಸನ, ಹೊಳೆನರಸೀಪುರ ತಾಲ್ಲೂಕು ಭಾಗದಲ್ಲಿ ತುಂತುರು ಮಳೆಯಾಗಿದೆ.

ಕೆಲ ಭಾಗದಲ್ಲಿ ಮಂಗಳವಾರ ಸಂಜೆ 6 ಗಂಟೆಗೆ ಮಳೆ ಪ್ರಾರಂಭವಾದರೆ, ಕೆಲ ಭಾಗದಲ್ಲಿ ರಾತ್ರಿ ವೇಳೆಗೆ ಆರಂಭವಾಗಿದ್ದರಿಂದ ಕಣದಲ್ಲಿ ಒಣ ಹಾಕಿದ್ದ ಕಾಫಿ ಮಳೆ ಯಿಂದ ನೆನೆಯುವುದರಿಂದ ಕಾಪಾಡಿ ಕೊಳ್ಳಲಾಗದೆ ಕೈಚೆಲ್ಲಿ ಕೂರ ಬೇಕಾಯಿತು.

» ಮೂರನೇ ಪುಟದಲ್ಲಿ

# ಅಪರಾಧ ಪ್ರಕರಣ ನಿಯಂತ್ರಣಕ್ಕೆ ಅಗತ್ಯ ಕ್ರಮ: ಎಸ್.ಪಿ.

## ಜನರ ಸಹಕಾರ ಪಡೆದು ಟ್ರಾಫಿಕ್ ಸಮಸ್ಯೆ ನಿವಾರಣೆ : ರೌಡಿಗಳಿಗೆ ಕಡಿವಾಣ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳನ್ನು ನಿಯಂತ್ರಣಕ್ಕೆ ತರಲು ಜನರ ಸಹಕಾರ ಪಡೆದುಕೊಂಡು ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಅವರು ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೌಡಿಗಳಿಗೆ ಕಡಿವಾಣ ಹಾಕುವ ಜೊತೆಗೆ ಅನೈತಿಕ ಚಟುವಟಿಕೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಪೊಲೀಸರ ಗಸ್ತು ಹೆಚ್ಚಿಸಲಾಗುವುದು. ಜಿಲ್ಲೆಯಲ್ಲಿ ನಡೆಯುವ ಅಕ್ರಮ ಚಟುವಟಿಕೆಗಳ ಬಗ್ಗೆ ಸಾರ್ವಜನಿಕರು ನನ್ನನ್ನು



ನೇರವಾಗಿ ಸಂಪರ್ಕಿಸಿ ದೂರು ನೀಡಬಹುದಾಗಿದೆ. ತಕ್ಷಣ ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ಅಪರಾಧ ಚಟುವಟಿಕೆಗಳನ್ನು ನಡೆಯದಂತೆ, ಅಂತಹ ಕೃತ್ಯಗಳು ನಡೆದ ಸಂದರ್ಭದಲ್ಲಿ ಸೂಕ್ತ ತನಿಖೆ ನಡೆಸುವುದು ಪೊಲೀಸ್ ಇಲಾಖೆಯ ಜವಾಬ್ದಾರಿ. ಆ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲಾಗುವುದು. ನಗರ ಸೇರಿ ಜಿಲ್ಲೆಯ ವಿವಿಧೆಡೆಗಳಲ್ಲಿರುವ ಟ್ರಾಫಿಕ್ ಸಮಸ್ಯೆಯನ್ನು ಹಂತ-ಹಂತವಾಗಿ ಪರಿಹರಿಸಲಾಗುವುದು. ವಾಹನಗಳ ನಿರ್ವಹಣೆ, ಸವಾರರ ಸುರಕ್ಷತೆಗೆ ಒತ್ತು ನೀಡಲಾಗುವುದೆಂದು ತಿಳಿಸಿದರು.

ಪಾರ್ಕಿಂಗ್ ಸಮಸ್ಯೆ ನಿವಾರಣೆಗೆ ಜಿಲ್ಲಾಡಳಿತದ ಸಹಕಾರ ಪಡೆದುಕೊಂಡು ಅಗತ್ಯವಿರುವ ಕಡೆಗಳಲ್ಲಿ ವಾಹನಗಳ ನಿಲುಗಡೆಗೆ ಸ್ಥಳ ನಿಗದಿಪಡಿಸಲಾಗುವುದು. ಶಾಲೆ, ಆಸ್ಪತ್ರೆ ವ್ಯಾಪ್ತಿಯಲ್ಲಿ ಉಂಟಾಗಿರುವ ಟ್ರಾಫಿಕ್ ಸಮಸ್ಯೆ ನಿವಾರಣೆಗೆ ಸಂಬಂಧಪಟ್ಟವರೊಂದಿಗೆ ಚರ್ಚಿಸಿ ಸಮಸ್ಯೆ ಪರಿಹರಿಸಲಾಗುವುದು. ವಾಹನ ಸವಾರರ ಸುರಕ್ಷತೆ ದೃಷ್ಟಿಯಿಂದ ಪ್ರತಿಯೊಬ್ಬರೂ ಸಂಚಾರ ನಿಯಮ ಪಾಲನೆ ಮಾಡಬೇಕು. ಬೈಕ್ ಸವಾರರು ಹೆಲ್ಮೆಟ್ ಧರಿಸುವುದು ಕಡ್ಡಾಯವಾಗಿದೆ , ಥ್ರಿಬಲ್ ರೈಡಿಂಗ್ ಮಾಡಬಾರದೆಂದು ಸೂಚಿಸಿದ ಅವರು, ಜಿಲ್ಲೆಗೆ ಹೊಸದಾಗಿ ಆಗಮಿಸಿ ಕೆಲವೇ ದಿನಗಳಾಗಿವೆ. ಇಲ್ಲಿನ ಸಮಸ್ಯೆಗಳನ್ನು ಅರ್ಥೈಸಿಕೊಂಡು ಪರಿಹರಿಸಲು ಎಲ್ಲರ ಸಹಕಾರ ಪಡೆದುಕೊಳ್ಳಲಾಗುವುದೆಂದರು.

### ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಹಿಂದಿನ ಆದೇಶ ಎತ್ತಿ ಹಿಡಿದ ಕೋರ್ಟ್

• ಪ್ರಜೋದಯ ವರದಿ

**ಹಾಸನ:** ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಕಾರ್ಯನಿರ್ವಹಣೆಗೆ ಅಡ್ಡಿಯುಂಟು ಮಾಡದಂತೆ ಈ ಹಿಂದೆ ನೀಡಿದ್ದ ಆದೇಶವನ್ನೇ ಜಿಲ್ಲಾ ಸಿವಿಲ್ ನ್ಯಾಯಾಲಯ ಪುನಃ ಎತ್ತಿ ಹಿಡಿದಿದೆ.

ಈ ಹಿಂದಿನ ಆದೇಶಕ್ಕೆ ತಡೆಯಾಜ್ಞೆ ನೀಡಿ ತಮಗೆ ಅಧಿಕಾರ ಚಲಾಯಿಸಲು ಅವಕಾಶ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ಪುರಸ್ಕರಿಸದೆ, ಹಾಲಿ ಅಧ್ಯಕ್ಷ ಆರ್ .ಟಿ.ದ್ಯಾವೇಗೌಡ ಹಾಗು ಕಾರ್ಯದರ್ಶಿ ಜಗದೀಶ್ ಚೌಡುವಳ್ಳಿ ಅವರ ತಂಡದ ಆಡಳಿತ ನಿರ್ವಹಣೆಗೆ ಅವಕಾಶ ಮಾಡಿಕೊಟ್ಟಿದೆ.

# ನೌಕರರ ಎಡವಟ್ಟು: ಲೈನ್‌ಮ್ಯಾನ್‌ಗೆ ಗಂಭೀರ ಗಾಯ

• ಪ್ರಜೋದಯ ವರದಿ

**ಸಕಲೇಶಪುರ:** ವಿದ್ಯುತ್ ಕಂಬವೇರಿ ದುರಸ್ತಿ ಕಾರ್ಯ ಮಾಡುತ್ತಿದ್ದಾಗ ಏಕಾಏಕಿ ವಿದ್ಯುತ್ ಪ್ರವಹಿಸಿ ಲೈನ್ ಮ್ಯಾನ್ ಗಂಭೀರ ಗಾಯಗೊಂಡಿರುವ ಘಟನೆ ತಾಲ್ಲೂಕಿನ ಹಲಸುಲಿಗೆ ಗ್ರಾಮದಲ್ಲಿ ಬುಧವಾರ ನಡೆದಿದೆ.

ಪಟ್ಟಣದ ಕುಶಾಲನಗರ ಬಡಾವಣೆ ನಿವಾಸಿ ಸೆಸ್ಕಾಂ ಲೈನ್‌ಮ್ಯಾನ್ ಗೋಪಿ ಗಾಯಗೊಂಡಿದ್ದಾರೆ. ಉದೇವಾರ ಫೀಡರ್ ವ್ಯಾಪ್ತಿಯ ಹಲಸುಲಿಗೆ ಕ್ಯಾಂಪ್‌ನಲ್ಲಿ ವಿದ್ಯುತ್ ತಂತಿ ದುರಸ್ತಿ ನಡೆಯುತ್ತಿದ್ದ ವೇಳೆ ಅವಘಡ ಸಂಭವಿಸಿದೆ. ದುರಸ್ತಿ ಕಾರ್ಯಕ್ಕಾಗಿ ಮಾರ್ಗ ಮುಕ್ತತೆ (ಶಟ್‌ಡೌನ್) ಪಡೆಯಲಾಗಿದ್ದು, ಇನ್ನೇನು ಕೆಲವೇ ನಿಮಿಷಗಳಲ್ಲಿ ಕೆಲಸ ಮುಗಿಯಬೇಕಾದ ಸಂದರ್ಭದಲ್ಲಿ



ಉಪಕೇಂದ್ರದಲ್ಲಿ ಉಂಟಾದ ಗೊಂದಲದಿಂದ ಅಕಾಲಿಕವಾಗಿ ವಿದ್ಯುತ್ ಸರಬರಾಜು ನೀಡಲಾಗಿದೆ. ಪರಿಣಾಮವಾಗಿ ಲೈನ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಗೋಪಿ ಅವರಿಗೆ ವಿದ್ಯುತ್ ಪ್ರವಹಿಸಿ ಗಂಭೀರವಾಗಿ ಗಾಯವಾಗಿದೆ. ಬಾಳ್ಳುಪೇಟೆ ಹಾಗು ಶುಕ್ರವಾರ ಸಂತೆ ಉಪಕೇಂದ್ರಗಳ ಜೂನಿಯರ್ ಇಂಜಿನೀಯರ್‌ಗಳ ಮಾರ್ಗ ಮುಕ್ತತೆ ಪಡೆದುಕೊಂಡಿದ್ದರು. ಈ ನಡುವೆ ಶುಕ್ರವಾರ ಸಂತೆ ಜೂನಿಯರ್ ಇಂಜಿನೀಯರ್ ಲೋಕೇಶ್ ವಾಪಾಸ್ ವಿದ್ಯುತ್ ಸರಬರಾಜು ನೀಡಲು ಮನವಿ ಮಾಡಿದ್ದಾರೆ. ಆದರೆ, ಉಪಕೇಂದ್ರದಲ್ಲಿ ಶುಕ್ರವಾರ ಸಂತೆ ಕಡೆಗೆ ವಿದ್ಯುತ್ ನೀಡುವ ಬದಲು ಉದೇವಾರ ಫೀಡರ್ ವಿದ್ಯುತ್ ಸರಬರಾಜು ನೀಡಿದ್ದರಿಂದ ಅವಘಡ ಸಂಭವಿಸಿದೆ ಎನ್ನಲಾಗಿದೆ.

ಗಂಭೀರವಾಗಿ ಗಾಯಗೊಂಡ ಗೋಪಿ ಅವರಿಗೆ ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಘಟನೆಗೆ ಸಂಬಂಧ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೆಂದು ಸೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಹರೀಶ್ ಅವರು ತಿಳಿಸಿದ್ದಾರೆ.

### ಸರ್ಕಾರಿ ನೌಕರರ ಕ್ರೀಡಾಕೂಟ

**ಜ.20, 21 ರಂದು**

• ಪ್ರಜೋದಯ ವರದಿ

**ಹಾಸನ:** ಸರ್ಕಾರಿ ನೌಕರರ ಜಿಲ್ಲಾ ಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಜ.20 ಮತ್ತು 21 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ನೌಕರರ ಸಂಘದ ಜಿಲ್ಲಾಧ್ಯಕ್ಷ ಬಿ.ಪಿ.ಕೃಷ್ಣೇಗೌಡ ಅವರು ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಕ್ರೀಡಾಂಗಣದ ಹಾಕಿ ಮೈದಾನದಲ್ಲಿ ಆಟೋಟ ಸ್ಪರ್ಧೆ ನಡೆಯಲಿವೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅವರು ಕ್ರೀಡಾಕೂಟಕ್ಕೆ ಚಾಲನೆ ನೀಡುವರು. ಶಾಸಕ ಹೆಚ್.ಪಿ. ಸ್ವರೂಪ್ ಅವರು ಅಧ್ಯಕ್ಷತೆ ವಹಿಸುವರು. ಗೃಹ ಮಂಡಳಿ ಅಧ್ಯಕ್ಷ ಕೆ. ಎಂ.ಶಿವಲಿಂಗೇಗೌಡ ಉಪಸ್ಥಿತರಿರುವರು.

» ನಾಲ್ಕನೇ ಪುಟದಲ್ಲಿ

## ಪುತ್ರನ ಆರೋಗ್ಯಕ್ಕಾಗಿ 2 ಲಕ್ಷ ರೂ. ಸಾಲ | ದನ ಕಟ್ಟುವ ಜಾಗದಲ್ಲಿ ಹಿರಿಯರ ವಾಸ್ತವ್ಯ


# ಸಾಲ ಪಾವತಿಸದ ವೃದ್ಧ ದಂಪತಿಯನ್ನು ಬೀದಿಗೆ ದೂಡಿದ ಫೈನಾನ್ಸ್

ರವಿ ದುಮ್ಮಿ

• ಪ್ರಜೋದಯ ವರದಿ

**ಅರಕಲಗೂಡು:** ಮಗನ ಆರೋಗ್ಯಕ್ಕಾಗಿ ಖಾಸಗಿ ಫೈನಾನ್ಸ್‌ನಲ್ಲಿ ಸಾಲ ಪಡೆದಿದ್ದ ವೃದ್ಧ ದಂಪತಿ ಸಾಲ ಪಾವತಿಸದ ಹಿನ್ನಲೆಯಲ್ಲಿ ಮನೆ ಕಳೆದುಕೊಂಡು ಬೀದಿಗೆ ಬಿದ್ದಿದ್ದಾರೆ. ದೊಡ್ಡಮಗ್ಗೆ ಹೋಬಳಿ ಕೊರಟಿಕೆರೆ ದಲಿತ ಕಾಲೋನಿಯ ಸಣ್ಣಯ್ಯ (80) ಮತ್ತು ಜಯಮ್ಮ (75) ಅವರು2 ಲಕ್ಷ ರೂ. ಸಾಲದ ಸುಳಿಗೆ ಸಿಲುಕಿ ಪರದಾಡು ತ್ತಿದ್ದಾರೆ.

2023ರಲ್ಲಿ ಹೆಂಚಿನ ಹಳೆಯ ಮನೆಯನ್ನು ವೃದ್ಧ ದಂಪತಿ ಒತ್ತೆ ಇಟ್ಟು 2 ಲಕ್ಷ ರೂ. ಸಾಲ ಪಡೆದು ಹಿರಿಯ ಮಗ ವಸಂತ್ ಎಂಬಾತನನ್ನು ಕ್ಯಾನ್ಸರ್ ರೋಗದಿಂದ ಗುಣಪಡಿಸಿದ್ದಾರೆ. ಈ ವೇಳೆ ತಂದೆ ಸಣ್ಣಯ್ಯ ಕೂಡ ಅನಾರೋಗ್ಯಕ್ಕೆ ತುತ್ತಾದ



ಹಿನ್ನಲೆ ಮತ್ತಷ್ಟು ಹಣ ವ್ಯಯ ಮಾಡಿದ್ದಾರೆ. ಉಳಿದ ಹಣದಲ್ಲಿ ಹಾಲು ಕೊಡುವ ಎರಡು ಹಸು ಖರೀದಿಸಿದ್ದರು. ಹೈನುಗಾರಿಕೆ ಮೂಲಕ ಬದುಕು ಸವೆಸುತ್ತಿದ್ದ ಅವರಿಗೆ ಸಾಲದ ಕಂತು ಕಟ್ಟುತ್ತಿದ್ದರು. ನಂತರ ಹಸುಗಳು ಸರಿಯಾಗಿ ಹಾಲು ನೀಡದ ಪರಿಣಾಮ ಅವುಗಳನ್ನು ಮಾರಿ ಸ್ಥಳೀಯವಾಗಿ ಎರಡು ಹಸು ಕಟ್ಟಿದ್ದಾರೆ. ಈ ವೇಳೆಗೆ ಮಾಡಿದ ಸಾಲವನ್ನು ಸರಿಯಾಗಿ ತೀರಿಸದ ಪರಿಣಾಮ ಸಾಲ ನೀಡಿದ ಇಕ್ವಿಟಾಸ್ ಫೈನಾನ್ಸ್‌ನವರು ಕಾನೂನು ರೀತಿ ಕ್ರಮ ಕೈಗೊಂಡಿದ್ದು, ಸಾಲಕ್ಕೆ ಒತ್ತೆ ಇಟ್ಟಿದ್ದ ಹಳೆಯ ಮನೆಗೆ ಬೀಗ ಹಾಕಿ ವೃದ್ಧ ದಂಪತಿ ಮನೆಯಲ್ಲಿ ವಾಸ ಮಾಡದಂತೆ ನಿರ್ಬಂಧ ವಿಧಿಸಿದ್ದಾರೆ.

ಮಕ್ಕಳ ಆರೋಗ್ಯ ರಕ್ಷಣೆಗಾಗಿ

> ವಯಸ್ಸಾದ ನಾವು ಮಕ್ಕಳ ಹಿತಕ್ಕೋಸ್ಕರ ಸಾಲ ಮಾಡಿದ್ದೇವೆ. ಆರಂಭದಲ್ಲಿ ಮಕ್ಕಳೇ 80 ಸಾವಿರ ರೂ. ಹಣ ಕಟ್ಟಿದ್ದಾರೆ. ನಂತದಲ್ಲಿ ಇಡೀ ಕುಟುಂಬ ಅನಾರೋಗ್ಯ ಸಮಸ್ಯೆಗೆ ಒಳಗಾದ ಹಿನ್ನಲೆ ಸಾಲದ ಕಂತು ಕಟ್ಟಲು ಸಾಧ್ಯವಾಗಿಲ್ಲ. ಮಕ್ಕಳು ಕಟ್ಟದಿದ್ದರೂ ಕೂಡ ಕೂಲಿ ಮಾಡಿ ಬಾಕಿ ಸಾಲ ತೀರಿಸು ತ್ತೇವೆ. ಸಾಲ ನೀಡಿರುವ ಕಂಪನಿ ಅವಕಾಶ ಮಾಡಿಕೊಡಬೇಕು. ತಾಲ್ಲೂಕು ಆಡಳಿತ, ಜನಪ್ರತಿನಿಧಿಗಳು, ಉಳ್ಳವರು ನಮ್ಮ ಕಷ್ಟಕ್ಕೆ ನೇರವಾಗಬೇಕೆಂದು ಕೈಮುಗಿದು ಬೇಡಿಕೊಳ್ಳುತ್ತೇವೆ.
>
> -ಸಣ್ಣಯ್ಯ, ಜಯಮ್ಮ

> ಮಕ್ಕಳು ಮಾಡಿದ ತಪ್ಪಿಗೆ ಹೆತ್ತವರಿಗೆ ಈ ವಯಸ್ಸಿನಲ್ಲಿ ತೊಂದರೆ ಕೊಡಬಾರದು. ವೃದ್ಧ ದಂಪತಿ ಮಾಡಿದ ಸಾಲವನ್ನು ತೀರಿಸಲಾಗದೆ ಬೀದಿಗೆ ಬಿದ್ದು ಹಿತ್ತಲಲ್ಲಿ ಜಾನುವಾರುಗಳೊಂದಿಗೆ ವಾಸ ಮಾಡುತ್ತಿರುವ ದೃಶ್ಯ ಹೃದಯ ಕಲಕುವಂತಿದೆ. ನ್ಯಾಯಾಲಯದ ಆದೇಶದಂತೆ ಮನೆಯನ್ನು ಜಪ್ತಿ ಮಾಡಲಾಗಿದೆ. ಈಗ ಮನುಷ್ಯತ್ವದೊಂದಿಗೆ ವೃದ್ಧ ದಂಪತಿ ನೆರವಿಗೆ ಕೈಜೋಡಿಸಬೇಕಿದೆ. ಅವರಿಗೆ ಆಹಾರ ಕಿಟ್, ಇತರೆ ವ್ಯವಸ್ಥೆಯನ್ನು ಕಲ್ಪಿಸಲಾಗುವುದು.
>
> -ಸೌಮ್ಯ, ತಹಶೀಲ್ದಾರ್



ಮಾಡಿದ್ದ ಸಾಲ ತಂದೆ-ತಾಯಿಗೆ ಶೂಲವಾಗಿ ಪರಿಣಮಿಸಿದೆ. ಸಾಲದ ಹಣ ಪಡೆದು ಆರೋಗ್ಯ ರಕ್ಷಣೆ ಮತ್ತು ಇತರೆ ಸ್ವಂತ ಕಾರ್ಯಗಳನ್ನು ನೀಗಿಸಿಕೊಂಡಿರುವ ಮಕ್ಕಳು ಸಾಲ ತೀರಿಸಲು ನಿಷ್ಪ್ರಯೋಜಕರಾಗಿದ್ದಾರೆ. ತಂದೆ-ತಾಯಿಯಿಂದ ದೂರ ಉಳಿದಿರುವ ಮಕ್ಕಳು ಸಾಲ ತೀರಿಸಲು ಮುಂದಾಗಿಲ್ಲ. ಬದಲಾಗಿ ತಂದೆ-ತಾಯಿಯನ್ನು ಕೊರೆಯುವ ಚಳಿಯಲ್ಲಿ ದನಗಳನ್ನು ಕಟ್ಟಿ ಹಾಕುವ ಹಿತ್ತಲಿನಲ್ಲಿ ಬಂಧನದಲ್ಲಿಟ್ಟಿದ್ದಾರೆ.

» ನಾಲ್ಕನೇ ಪುಟದಲ್ಲಿ

### ಭತ್ತದ ಬಣವೆಗೆ ಆಕಸ್ಮಿಕ ಬೆಂಕಿ

**ಅರೇಹಳ್ಳಿ :** ಭತ್ತದ ಬಣವೆ ಬೆಂಕಿಗಾಹುತಿಯಾಗಿರುವ ಘಟನೆ ಅರೇಹಳ್ಳಿ ಹೋಬಳಿ ಬೆಳ್ಳಾವರ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಚಂದ್ರಶೇಖರ್ ಅವರು ಭತ್ತವನ್ನು ಕೊಯ್ಲು ಮಾಡಿ, ಒಕ್ಕಣೆಗೆ ಕಣದಲ್ಲಿ ಗುಡ್ಡೆಹಾಕಿದ್ದರು.

ಮಂಗಳವಾರ ರಾತ್ರಿ ಕಾಡಾನೆಗಳ ಹಿಂಡು ದಾಳಿ ನಡೆಸಿ, ಭತ್ತದ ಗುಡ್ಡೆಯನ್ನು ತಿಂದು ಚೆಲ್ಲಾಡಿ ಹೋಗಿದ್ದವು. ಗುರುವಾರ ಒಕ್ಕಣೆಗೆ ಯಂತ್ರ ಮತ್ತು ಕಾರ್ಮಿಕರನ್ನು ಕರೆದುಕೊಂಡು ಬರಲು ಹೋಗಿದ್ದಾಗ ಬಣವೆಗೆ ಆಕಸ್ಮಿಕ ಬೆಂಕಿ ತಗುಲಿದೆ. ಅಕ್ಕಪಕ್ಕದವರು ಬೆಂಕಿ ನಂದಿಸಲು ಪ್ರಯತ್ನಪಟ್ಟರೂ ಸಾಧ್ಯವಾಗದೆ ಬಣವೆ ಸಂಪೂರ್ಣ ಸುಟ್ಟು ಕರಲಾಗಿದೆ.



